## 20. ಲಾಕ್‌ಡೌನ್ ವಿಸ್ತರಣೆ ಇಲ್ಲ–ಸಿಎಂ ಸೂಚನೆ

ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಲಾಕ್‌ಡೌನ್ ವಿಸ್ತರಣೆಯಾಗುತ್ತದೆ ಎಂಬ ವದಂತಿಗಳಿಗೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ತೆರೆ ಎಳೆದಿದ್ದು, ಕೊರೋನಾ ನಿಯಂತ್ರಣಕ್ಕೆ ಲಾಕ್‌ಡೌನ್ ಪರಿಹಾರವಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಬೆಂಗಳೂರು ವ್ಯಾಪ್ತಿಯ ಸಚಿವರು, ಸಂಸದರು ಮತ್ತು ಮುಖ್ಯ ಕಾರ್ಯದರ್ಶಿ ಜೊತೆ ನಡೆಸಿದ ಸಭೆಯಲ್ಲಿ ಸ್ಪಷ್ಟನೆ ನೀಡಿದ ಮುಖ್ಯಮಂತ್ರಿಯವರು ಲಾಕ್‌ಡೌನ್ ಮಾತೇ ಬೇಡ ಕೊರೋನಾ ನಿಯಂತ್ರಣಕ್ಕೆ ಲಾಕ್‌ಡೌನ್ ಪರಿಹಾರವಲ್ಲ. ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಲಾಕ್‌ಡೌನ್ ಮುಂದುವರೆಸುವ ಯಾವುದೇ ಯೋಜನೆ ಸರ್ಕಾರದ ಮುಂದೆ ಇಲ್ಲ. ತಪಾಸಣೆ, ಪರೀಕ್ಷೆ, ಚಿಕಿತ್ಸೆ ನಿಯಂತ್ರಣಕ್ಕೆ ಹೆಚ್ಚು ಒತ್ತು ನೀಡಿ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದು ಸಚಿವರಿಗೆ ಸೂಚಿಸಿದ್ದಾರೆ.

ಕೊರೋನಾ ನಿಯಂತ್ರಣ ನಿಟ್ಟಿನಲ್ಲಿ ಪ್ರತಿ ವಿಧಾನಸಭೆ ಕ್ಷೇತ್ರ ಹಾಗೂ ವಾರ್ಡ್ ಮಟ್ಟದಲ್ಲೇ ಕಾರ್ಯ ಯೋಜನೆ ರೂಪಿಸಿ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ್ದಾರೆ. ಆಯಾ ವಿಧಾನಸಭೆ ಕ್ಷೇತ್ರ ಹಾಗೂ ವಾರ್ಡ್ ಮಟ್ಟದಲ್ಲಿ ಪತ್ತೆಯಾದ ಸೋಂಕಿತರಿಗೆ ಸ್ಥಳೀಯವಾಗಿಯೇ ಚಿಕಿತ್ಸೆ ದೊರೆಯುವಂತಾಗಬೇಕು. ಈ ನಿಟ್ಟಿನಲ್ಲಿ ಖಾಸಗಿ ಆಸ್ಪತ್ರೆಗಳ ಜೊತೆ ಸಮನ್ವಯತೆ ಸಾಧಿಸಿ, ಕಲ್ಯಾಣ ಮಂಟಪ, ಸರ್ವೀಸ್ ಅಪಾರ್ಟ್‌ಮೆಂಟ್ ಬಾಡಿಗೆಗೆ ಪಡೆಯಿರಿ ಎಂದು ನಿರ್ದೇಶನ ನೀಡಿದ್ದಾರೆ.

ಸೋಂಕಿತರಿಗೆ ಆಸ್ಪತ್ರೆಗಳಲ್ಲಿ ದಾಖಲಾಗಲು ಆಗುತ್ತಿರುವ ತೊಡಕು ನಿವಾರಿಸುವ ಸಂಬಂಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಹಾಗೂ ಖಾಸಗಿ ಆಸ್ಪತ್ರೆಗಳು ಬೆಡ್ ನೀಡದೇ ಇದ್ದರೆ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ತಾಕೀತು ಮಾಡಿದ್ದಾರೆ. ಬೆಂಗಳೂರಿನಲ್ಲಿ ಕೊರೋನಾ ನಿಯಂತ್ರಣ ಕುರಿತು ಎಂಟು ವಲಯಗಳ ಉಸ್ತುವಾರಿಗಳ ಜೊತೆ ಸಭೆ ನಡೆಸಿದ ಅವರು, ಪ್ರತಿ ವಾರ್ಡ್‌ಗಳಲ್ಲಿ ಕಲ್ಯಾಣ ಮಂಟಪ ಹಾಗೂ ವಸತಿ ಗೃಹ ಗುರುತಿಸಲಾಗಿದ್ದು, ಪ್ರತ್ಯೇಕವಾಗಿ ವಾಸಿಸಲು ಕೊಠಡಿ ವ್ಯವಸ್ಥೆ ಇಲ್ಲದವರಿಗೆ ಕ್ವಾರಂಟೈನ್ ಮಾಡಲು ಇವುಗಳನ್ನು ಬಳಕೆ ಮಾಡಿಕೊಳ್ಳಿ ಎಂದು ತಿಳಿಸಿದರು.

ಪ್ರತಿ ವಾರ್ಡ್‌ನಲ್ಲೂ ಸ್ವಯಂ ಸೇವಕರಿದ್ದೂ, ಆ್ಯಂಬುಲೆನ್ಸ್ ಸಹ ನಿಗದಿ ಮಾಡಲಾಗಿದೆ. ಖಾಸಗಿ ಆಸ್ಪತ್ರೆಗಳಲ್ಲಿ ಕೊರೋನಾ ಸೋಂಕಿತರ ದಾಖಲಾತಿ ಮತ್ತು ಹಾಸಿಗೆಗಳ ಲಭ್ಯತೆ ಕುರಿತು ಮಾಹಿತಿ ಒದಗಿಸಲು ಸ್ವಯಂಸೇವಕರು ಹಾಗೂ ನೋಡೆಲ್ ಅಧಿಕಾರಿಗಳ ನೇಮಕ ಮಾಡಲಾಗುವುದು. ರಾಜ್ಯದಲ್ಲಿ ಪರೀಕ್ಷೆಗಳ ಸಂಖ್ಯೆ ಹೆಚ್ಚಾಗಬೇಕು, ಪರೀಕ್ಷೆಯ ಫಲಿತಾಂಶ ದೊರೆತ ಎರಡು ಗಂಟೆಗಳೊಳಗೆ ಹಾಸಿಗೆ ಹಂಚಿಕೆ ಮಾಡಿ ಆ್ಯಂಬುಲೆನ್ಸ್ ಅವರ ಮನೆ ಬಾಗಿಲಿಗೆ ಹೋಗಿ ಆಸ್ಪತ್ರೆಗೆ ಕರೆದೊಯ್ಯಬೇಕು. ಈ ವ್ಯವಸ್ಥೆ ಕೇಂದ್ರೀಕರಿಸಿ ವಲಯವಾರು ಮೇಲ್ವಿಚಾರಣೆ ನಡೆಸಿ ಎಂದು ಸೂಚಿಸಿದರು.

ಖಾಸಗಿ ಆಸ್ಪತ್ರೆಗಳೊಂದಿಗೆ ಸಭೆ ನಡೆಸಿ, ಕೋವಿಡ್ ಹಾಗೂ ನಾನ್ ಕೋವಿಡ್ ರೋಗಿಗಳಿಗೆ ಚಿಕಿತ್ಸಾ ಸೌಲಭ್ಯ ದೊರಕುವುದನ್ನು ಖಾತರಿಪಡಿಸಿಕೊಳ್ಳಲಿ. ರೋಗ ಲಕ್ಷಣ ಇಲ್ಲದ ಸೋಂಕಿತರನ್ನು ಆಸ್ಪತ್ರೆಗೆ ದಾಖಲಿಸದೆ ಕೋವಿಡ್ ಕೇರ್ ಸೆಂಟರ್‌ಗಳಿಗೆ ಅಥವಾ ಹೋಂ ಕ್ವಾರಂಟೈನ್ ಮಾಡಿ, 65 ವರ್ಷ ಮೇಲ್ಪಟ್ಟ ರೋಗ ಲಕ್ಷಣ ಇರುವ ವ್ಯಕ್ತಿಗಳಿಗೆ ಆದ್ಯತೆ ಮೇರೆಗೆ ಹಾಸಿಗೆ ಹಂಚಿಕೆ ಮಾಡಬೇಕು. ಆಸ್ಪತ್ರೆಯಲ್ಲಿ ಮೃತರಾದವರಿಗೆ ರ್‍ಯಾಪಿಡ್ ಆಂಟಿಜೆನ್ ಪರೀಕ್ಷೆ ನಡೆಸಿ ಪಾರ್ಥಿವ ಶರೀರ ಕೂಡಲೇ ಹಸ್ತಾಂತರಿಸಲು ಅಥವಾ ನಿಯಮಾನುಸಾರ ಅಂತ್ಯಕ್ರಿಯೆಗೆ ಕ್ರಮ ಕೈಗೊಳ್ಳಬೇಕು. ವೈದ್ಯರ ಕೊರತೆ ನಿವಾರಿಸಲು ಹುದ್ದೆ ಭರ್ತಿ ಪ್ರಕ್ರಿಯೆ ನಡೆಯುತ್ತಿದೆ. ಆದಷ್ಟು ಬೇಗ ಅಗತ್ಯ ವೈದ್ಯರು ಲಭ್ಯವಾಗುವಂತೆ ನೋಡಿಕೊಳ್ಳಲಾಗುವುದು ಎಂದು ಹೇಳಿದರು.

ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಸಚಿವ ಡಿ.ವಿ.ಸದಾನಂದಗೌಡ, ಡಿಸಿಎಂ ಡಾ: ಸಿ.ಎನ್.ಅಶ್ವತ್ಥನಾರಾಯಣ, ಸಚಿವರಾದ ಬಸವರಾಜಬೊಮ್ಮಾಯಿ, ಆರ್.ಅಶೋಕ್, ವಿ.ಸೋಮಣ್ಣ, ಎಸ್.ಟಿ.ಸೋಮಶೇಖರ್, ಸುರೇಶ್ ಕುಮಾರ್, ಭೈರತಿ ಬಸವರಾಜ್, ಸಂಸದರಾದ ತೇಜಸ್ವಿ ಸೂರ್ಯ, ಪಿ.ಸಿ.ಮೋಹನ್, ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯಭಾಸ್ಕರ್ ಸಭೆಯಲ್ಲಿ ಪಾಲ್ಗೊಂಡಿದ್ದರು.

**ನಿಯಮ ಉಲ್ಲಂಘಿಸಿದರೆ ಕಠಿಣ ಕ್ರಮ:**–ಕೊರೋನಾ ಸೋಂಕಿತರು ಮತ್ತು ಪ್ರಥಮ ಸಂಪರ್ಕಿತರು ಕಡ್ಡಾಯವಾಗಿ ಹೋಂ ಕ್ವಾರಂಟೈನ್‌ಗೆ ಒಳಪಡುವುದು ಕಡ್ಡಾಯ ಇಲ್ಲದಿದ್ದರೆ ಕ್ರಮಕೈಗೊಳ್ಳುವುದು ಅನಿವಾರ್ಯ ಎಂದು ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯಭಾಸ್ಕರ್ ಎಚ್ಚರಿಕೆ ನೀಡಿದ್ದಾರೆ. ಕೊರೋನಾ ಸೋಂಕಿತರು, ಪ್ರಥಮ ಸಂಪರ್ಕಿತರು

ರಾಜ್ಯ ಸರ್ಕಾರ ರೂಪಿಸಿರುವ ಮಾರ್ಗಸೂಚಿ ಪಾಲನೆ ಮಾಡುವುದು ಕಡ್ಡಾಯ. ಉಲ್ಲಂಘನೆಯಾದರೆ ರಾಷ್ಟ್ರೀಯ ವಿಪತ್ತು ನಿರ್ವಹಣಾ ಕಾಯ್ದೆ–2005, ಸಾಂಕ್ರಾಮಿಕ ರೋಗಗಳ ಕಾಯ್ದೆ –1897 ಮತ್ತು ಭಾರತೀಯ ದಂಡ ಸಂಹಿತೆ ಅಡಿಯಲ್ಲಿ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಆದೇಶಿಸಿದ್ದಾರೆ.

**ಅತಿ ಹೆಚ್ಚುಸಾವು :** ಕೊರೋನಾ ಸೋಂಕಿನಿಂದ ರಾಜ್ಯದಲ್ಲಿ ಗರಿಷ್ಠ 115 ಸಾವು ಪ್ರಕರಣಗಳು ವರದಿಯಾಗಿದ್ದು, ಇದು ಈವರೆಗಿನ ದಾಖಲೆಯಾಗಿದೆ. ಮಹಾರಾಷ್ಟ್ರ ಬಿಟ್ಟರೆ ಅತಿ ಹೆಚ್ಚು ಸಾವು ರಾಜ್ಯದಲ್ಲಿ ಸಂಭವಿಸಿದೆ. ಮಹಾರಾಷ್ಟ್ರದಲ್ಲಿ ಅತಿ ಹೆಚ್ಚು 258 ಸೋಂಕಿತರ ಸಾವಾಗಿದ್ದು, ತಮಿಳುನಾಡಿನಲ್ಲಿ 79 ಮಂದಿ ಬಲಿಯಾಗಿದ್ದಾರೆ. ರಾಜ್ಯದಲ್ಲಿ 3,693 ಮಂದಿಗೆ ಹೊಸದಾಗಿ ಸೋಂಕು ತಗುಲಿರುವುದು ದೃಢಪಟ್ಟಿದ್ದು, 1028 ಮಂದಿ ಸೋಂಕಿನಿಂದ ಗುಣಮುಖರಾಗಿ ಮನೆಗೆ ತೆರಳಿದ್ದಾರೆ.

ಸೋಂಕು ಪ್ರಕರಣಗಳ ಪಟ್ಟಿಯಲ್ಲಿ ಬೆಂಗಳೂರು, ನಂತರ ಸ್ಥಾನದಲ್ಲಿ ದಕ್ಷಿಣ ಕನ್ನಡ, ಕಲಬುರಗಿ, ಬಳ್ಳಾರಿ ಇವೆ. ಸಾವಿನ ಪಟ್ಟಿಯಲ್ಲಿ ಬೆಂಗಳೂರು ನಂತರ 50ಕ್ಕೂ ಹೆಚ್ಚು ಸಾವಿನೊಂದಿಗೆ ಕ್ರಮವಾಗಿ ಮೈಸೂರು, ಬಳ್ಳಾರಿ, ಬೀದರ್, ದಕ್ಷಿಣ ಕನ್ನಡ, ಧಾರವಾಡ ಇವೆ. ರಾಜ್ಯದ ಒಟ್ಟಾರೆ ಸೋಂಕು ಪ್ರಕರಣಗಳ ಸಂಖ್ಯೆ 55,115 ಗುಣಮುಖರ ಸಂಖ್ಯೆ20,757 ಮೃತಪಟ್ಟವರ ಸಂಖ್ಯೆ 1147ಕ್ಕೆ ಏರಿಕೆಯಾಗಿದೆ.

ಆಧಾರ:ಉದಯವಾಣಿ, ದಿನಾಂಕ: 18.07.2020